## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 210 |
| ಸದಸ್ಯರ ಹೆಸರು | : | ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನ ಸಭೆಯಿಂಧ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 14-02-2023 |
| ಉತ್ತರಿಸುವ ಸಚಿವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಳೆದ 3 ವರ್ಷಗಳಿಂದ ಮಹಿಳೆಯರ ಮತ್ತು ಮಕ್ಕಳ ಅಕ್ರಮ ಸಾಗಾಣಿಕ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಹೌದಾದಲ್ಲಿ ದಾಖಲಾಗಿರುವ ಪ್ರಕರಣಗಳೆಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು) | ಬಂದಿದೆ.<br>ರಾಜ್ಯದಲ್ಲಿ ವರದಿಯಾಗಿರುವ ಮಹಿಳೆಯರ ಮತ್ತು ಮಕ್ಕಳ ಅಕ್ರಮ ಸಾಗಾಣಿಕೆ ಪ್ರಕರಣಗಳ ಜಿಲ್ಲಾವಾರು ಮಾಹಿತಿಯನ್ನು **ಅನುಬಂಧ-1ರಲ್ಲಿ** ಒದಗಿಸಲಾಗಿದೆ. |
| ಆ) | ಈ ರೀತಿ ಮಹಿಳೆಯರ ಮತ್ತು ಮಕ್ಕಳ ಅಕ್ರಮ ಸಾಗಾಣಿಕ ತಡೆಗಟ್ಟಲು ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು: | ಮಹಿಳೆಯರ ಮತ್ತು ಮಕ್ಕಳ ಅಕ್ರಮ ಸಾಗಾಣಿಕೆ ತಡೆಗಟ್ಟಲು ತೆಗೆದುಕೊಂಡಿರುವ ಕ್ರಮದ ಮಾಹಿತಿಯನ್ನು **ಅನುಬಂಧ-2ರಲ್ಲಿ** ಒದಗಿಸಿದೆ. |
| ಇ) | ಮಹಿಳೆಯರ ಆರ್ಥಿಕ, ಸಾಮಾಜಿಕ ಹಾಗೂ ರಾಜಕೀಯ ಸಬಲೀಕರಣಕ್ಕಾಗಿ ಸರ್ಕಾರದ ಯೋಜನೆಗಳು ಯಾವುವು: | ಮಹಿಳೆಯರ ಆರ್ಥಿಕ ಮತ್ತು ಸಾಮಾಜಿಕ ಸಬಲೀಕರಣಕ್ಕಾಗಿ ಅನುಷ್ಠಾನಗೊಳ್ಳುತ್ತಿರುವ ಯೋಜನೆಗಳ ವಿವರವನ್ನು **ಅನುಬಂಧ-3ರಲ್ಲಿ** ಒದಗಿಸಿದೆ. |
| ಈ) | ಕೌಟುಂಬಿಕ ಸಾಮಾಜಿಕ ಬೆಂಬಲವಿಲ್ಲದ, ಪ್ರತ್ಯೇಕ ಆದಾಯವಿಲ್ಲದ ಮಹಿಳೆಯರಿಗೆ ಸರ್ಕಾರವು ಯಾವ ರೀತಿಯಲ್ಲಿ ನೆರವು ಹಾಗೂ ಪುನರ್ವಸತಿ ಕಲ್ಪಿಸಲಾಗುವುದು. | ಸ್ವಾಧಾರ ಗೃಹಗಳಲ್ಲಿ ಸಂಕಷ್ಟಕರ ಪರಿಸ್ಥಿತಿಯಲ್ಲಿರುವ ಮಹಿಳೆಯರಿಗಾಗಿ ತಾತ್ಕಾಲಿಕ ಆಶ್ರಯ, ವೈದ್ಯಕೀಯ ಸೇವೆ, ಆಪ್ತ ಸಮಾಲೋಚನೆ ಮತ್ತು ಕಾನೂನು ನೆರವು ಒದಗಿಸಲಾಗುತ್ತಿದೆ. ಪ್ರಸ್ತುತ ರಾಜ್ಯಾದ್ಯಂತ 52 ಸ್ವಾಧಾರ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. |
| ಉ) | ಹಿರಿಯ ನಾಗರೀಕರ ಸಬಲೀಕರಣಕ್ಕಾಗಿ ಇರುವ ಯೋಜನೆಗಳು ಯಾವುವು? | ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖಾ ವತಿಯಿಂದ ಹಿರಿಯ ನಾಗರೀಕರಿಗೆ ಹಮ್ಮಿಕೊಂಡಿರುವ ಯೋಜನೆಗಳ ಮಾಹಿತಿಯನ್ನು **ಅನುಬಂಧ-04ರಲ್ಲಿ** ಒದಗಿಸಲಾಗಿರುತ್ತದೆ. |

**ಸಂಖ್ಯೆ:ಮಮಇ 21 ಮಮಅ 2023**

Halappa

**(ಆಚಾರ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಅನುಬಂಧ - 1

| HUMAN TRAFFICKING CASES FOR THE YEAR 2020 | | | | | | |
|---|---|---|---|---|---|---|
| SL NO | DISTRICT NAME | REPORTED | BOYS | GIRLS | MALE | FEMALE |
| 1 | Ballari | 4 | 0 | 0 | 0 | 7 |
| 2 | Bengaluru City | 99 | 1 | 12 | 10 | 276 |
| 3 | Bengaluru Dist | 3 | 4 | 0 | 8 | 6 |
| 4 | Bidar | 1 | 0 | 0 | 0 | 4 |
| 5 | Chickballapura | 1 | 0 | 1 | 0 | 1 |
| 6 | Chikkamagaluru | 1 | 0 | 0 | 0 | 1 |
| 7 | Davanagere | 4 | 0 | 2 | 0 | 6 |
| 8 | Hubballi Dharwad City | 2 | 0 | 0 | 0 | 6 |
| 9 | Kalaburagi City | 1 | 0 | 0 | 0 | 2 |
| 10 | Koppal | 1 | 0 | 0 | 0 | 2 |
| 11 | Mandya | 4 | 1 | 0 | 0 | 7 |
| 12 | Mangaluru City | 2 | 0 | 1 | 0 | 1 |
| 13 | Mysuru City | 6 | 0 | 2 | 0 | 6 |
| 14 | Ramanagara | 2 | 0 | 1 | 0 | 1 |
| 15 | Shivamogga | 3 | 0 | 0 | 8 | 4 |
| 16 | Tumakuru | 2 | 0 | 1 | 0 | 4 |
| 17 | Udupi | 1 | 0 | 1 | 0 | 0 |
| 18 | Uttara Kannada | 4 | 0 | 0 | 0 | 8 |
| 19 | Vijayanagara | 1 | 0 | 0 | 1 | 2 |
| 20 | Yadgir | 4 | 0 | 0 | 0 | 4 |
| | **Grand Total** | **146** | **6** | **21** | **27** | **348** |

| HUMAN TRAFFICKING CASES FOR THE YEAR 2021 | | | | | | |
|---|---|---|---|---|---|---|
| SL NO | DISTRICT NAME | REPORTED | BOYS | GIRLS | MALE | FEMALE |
| 1 | Bagalkot | 1 | 0 | 0 | 0 | 1 |
| 2 | Ballari | 4 | 0 | 0 | 0 | 5 |
| 3 | Belagavi Dist | 2 | 1 | 0 | 0 | 4 |
| 4 | Bengaluru City | 95 | 1 | 8 | 10 | 170 |
| 5 | Bengaluru Dist | 3 | 0 | 0 | 1 | 2 |
| 6 | Bidar | 1 | 0 | 0 | 0 | 1 |
| 7 | Chikkamagaluru | 2 | 0 | 2 | 0 | 0 |
| 8 | Davanagere | 4 | 0 | 0 | 1 | 6 |
| 9 | Dharwad | 1 | 0 | 0 | 0 | 1 |
| 10 | Hubballi Dharwad City | 7 | 1 | 0 | 1 | 9 |
| 11 | K.G.F | 3 | 1 | 0 | 1 | 3 |
| 12 | Kalaburagi City | 2 | 0 | 0 | 0 | 4 |
| 13 | Karnataka Railways | 6 | 8 | 1 | 1 | 0 |
| 14 | Kodagu | 1 | 0 | 0 | 0 | 1 |
| 15 | Koppal | 1 | 0 | 0 | 0 | 1 |
| 16 | Mangaluru City | 4 | 0 | 2 | 1 | 1 |
| 17 | Mysuru City | 1 | 0 | 0 | 1 | 0 |
| 18 | Mysuru Dist | 1 | 0 | 0 | 0 | 1 |
| 19 | Ramanagara | 5 | 6 | 1 | 2 | 1 |
| 20 | Shivamogga | 1 | 1 | 0 | 0 | 0 |
| 21 | Tumakuru | 3 | 0 | 1 | 0 | 4 |
| 22 | Uttara Kannada | 2 | 0 | 1 | 0 | 1 |
| 23 | Yadgir | 1 | 0 | 0 | 1 | 0 |
| **Grand Total** | | **151** | **19** | **16** | **20** | **216** |

| HUMAN TRAFFICKING CASES FOR THE YEAR 2022 | | | | | | |
|---|---|---|---|---|---|---|
| SL NO | DISTRICT NAME | REPORTED | BOYS | GIRLS | MALE | FEMALE |
| 1 | Bagalkot | 1 | 5 | 6 | 8 | 6 |
| 2 | Ballari | 3 | 2 | 3 | 0 | 2 |
| 3 | Bengaluru City | 93 | 1 | 3 | 30 | 218 |
| 4 | Bengaluru Dist | 3 | 0 | 0 | 0 | 6 |
| 5 | Chamarajanagar | 1 | 1 | 0 | 0 | 0 |
| 6 | Chickballapura | 2 | 0 | 0 | 0 | 2 |
| 7 | Chikkamagaluru | 1 | 0 | 1 | 0 | 0 |
| 8 | Davanagere | 6 | 1 | 1 | 1 | 5 |
| 9 | Dharwad | 1 | 0 | 0 | 0 | 3 |
| 10 | Hassan | 3 | 0 | 1 | 45 | 9 |
| 11 | Hubballi Dharwad City | 7 | 0 | 1 | 0 | 7 |
| 12 | K.G.F | 1 | 0 | 0 | 2 | 3 |
| 13 | Kalaburagi City | 1 | 0 | 0 | 0 | 1 |
| 14 | Karnataka Railways | 1 | 2 | 0 | 0 | 0 |
| 15 | Kodagu | 1 | 0 | 0 | 1 | 1 |
| 16 | Koppal | 1 | 0 | 0 | 0 | 2 |
| 17 | Mandya | 1 | 0 | 0 | 0 | 2 |
| 18 | Mangaluru City | 11 | 0 | 8 | 1 | 5 |
| 19 | Mysuru City | 3 | 0 | 1 | 0 | 4 |
| 20 | Mysuru Dist | 1 | 0 | 1 | 0 | 0 |
| 21 | Raichur | 4 | 1 | 0 | 0 | 4 |
| 22 | Ramanagara | 3 | 4 | 1 | 2 | 0 |
| 23 | Shivamogga | 3 | 2 | 3 | 10 | 4 |
| 24 | Tumakuru | 1 | 0 | 0 | 0 | 2 |
| 25 | Udupi | 1 | 0 | 0 | 0 | 0 |
| 26 | Uttara Kannada | 2 | 0 | 0 | 0 | 11 |
| 27 | Vijayanagara | 1 | 0 | 0 | 0 | 1 |
| **Grand Total** | | **157** | **19** | **30** | **100** | **298** |

| HUMAN TRAFFICKING CASES FOR THE YEAR 2023 (UPTO JANUARY) | | | | | | |
|---|---|---|---|---|---|---|
| **SL NO** | **DISTRICT NAME** | **REPORTED** | **BOYS** | **GIRLS** | **MALE** | **FEMALE** |
| 1 | Bengaluru City | 7 | 0 | 0 | 5 | 15 |
| 2 | Bengaluru Dist | 1 | 0 | 0 | 1 | 0 |
| 3 | Davanagere | 1 | 0 | 0 | 0 | 1 |
| 4 | Hubballi Dharwad City | 1 | 0 | 0 | 0 | 1 |
| 5 | Mysuru City | 1 | 0 | 1 | 0 | 0 |
| 6 | Ramanagara | 1 | 0 | 0 | 0 | 1 |
| | **Grand Total** | **12** | **0** | **1** | **6** | **18** |

## ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ .ಕೆ ಅಬ್ದುಲ್ ಜಬ್ಬರ್ (ವಿಧಾನ ಸಭೆಯಿಂಧ ಚುನಾಯಿತರಾದವರು) ಇವರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 210ಕ್ಕೆ ಅನುಬಂಧ-2

### ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

ಮಹಿಳೆಯರ ಮತ್ತು ಮಕ್ಕಳ ಅಕ್ರಮ ಸಾಗಾಣಿಕೆ ತಡೆಗಟ್ಟಲು ಸರ್ಕಾರವು ತೆಗೆದುಕೊಂಡಿರುವ ಕ್ರಮಗಳು ಈ ಕೆಳಗಿನಂತಿವೆ.

ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆ ಕುರಿತು ಅರಿವು ಮೂಡಿಸಲು, ವಿವಿಧ ಇಲಾಖೆಗಳ ಜವಾಬ್ದಾರಿ ಕುರಿತು ಹಾಗೂ ಪ್ರಕರಣಗಳು ದಾಖಲಾಗಿದ್ದಲ್ಲಿ ಅನುಸರಿಸಬೇಕಾದ ಕ್ರಮಗಳ ಕುರಿತು ಕ್ರಮ ಬದ್ಧ ಕಾರ್ಯವಿಧಾನದ ಮಾರ್ಗಸೂಚಿಯನ್ನು ಸಿದ್ಧಪಡಿಸಿ ಸಂಬಂಧಪಟ್ಟ ಇಲಾಖೆಗಳಿಗೆ ವಿತರಿಸಲಾಗಿದೆ.

ಮಹಿಳೆಯರ ಮತ್ತು ಮಕ್ಕಳ ಅಕ್ರಮ ಸಾಗಾಣಿಕೆ ತಡೆಗಟ್ಟುವ ಕುರಿತು ಅಬ್ದುಲ್‌ನಜೀರ್‌ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್‌ಸಂಸ್ಥೆ ಇವರ ಸಹಯೋಗದೊಂದಿಗೆ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕಾವಲು ಸಮಿತಿ ಸದಸ್ಯರಿಗೆ ಯೂ-ಟ್ಯೂಬ್‌ಮೂಲಕ ತರಬೇತಿ ನೀಡಲಾಗಿದೆ.

ಪ್ರತಿ ವರ್ಷ ಜುಲೈ 30 ರಂದು "ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲು ಭಾಗೀದಾರ ಇಲಾಖೆಗಳಿಗೆ ಅಗತ್ಯ ಕ್ರಮ ವಹಿಸಲು ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಂದ ಸುತ್ತೋಲೆ ಹೊರಡಿಸಲಾಗಿದೆ.

ದಿನಾಂಕ:30.07.2022 ರಂದು ಮಾನವ ಕಳ್ಳ ಸಾಗಾಣಿಕೆ ತಡೆ ಕುರಿತು ರಾಜ್ಯ ಮಟ್ಟದ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ.

ಮಹಿಳೆಯರ ಮತ್ತು ಮಕ್ಕಳ ಅಕ್ರಮ ಸಾಗಾಣಿಕೆ ತಡೆಗಟ್ಟಲು ಭಾಗೀದಾರ ಇಲಾಖೆಗಳ ಅಧಿಕಾರಿ/ಸಿಬ್ಬಂದಿಗಳಿಗೆ ತರಬೇತಿಯನ್ನು ನೀಡಲಾಗುತ್ತಿದೆ.

### ಒಳಾಡಳಿತ ಇಲಾಖೆ

ರಾಜ್ಯದಲ್ಲಿ ಮಹಿಳೆಯರು ಮತ್ತು ಮಕ್ಕಳ ಅಕ್ರಮ ಸಾಗಾಣಿಕಯನ್ನು ನಿಯಂತ್ರಿಸಲು ಮತ್ತು ತಡೆಗಟ್ಟಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.

- ಮಾನವ ಸಾಗಾಣಿಕ ಮಾಡುವವರ ವಿರುದ್ಧ ಬಾತ್ಮಿ ಸಂಗ್ರಹಿಸಿ ತಪ್ಪಿತಸ್ಥರ ವಿರುದ್ಧ ಕಲಂ. 370. 370(ಎ) ಐಪಿಸಿ ಮತ್ತು ಇಮ್ ಮೋರಲ್ ಟ್ರಾಫಿಕಿಂಗ್ ಪ್ರಿವೆನ್ಸ್ ಆಕ್ಟ್ (ಐ.ಟಿ.ಪಿ.ಎ) ಹಾಗೂ ಸಂಬಂಧಪಟ್ಟ ಇತರೆ ಕಾಯ್ದೆ ಮತ್ತು ಕಲಂ ರೀತ್ಯಾ ಪ್ರಕರಣಗಳನ್ನು ದಾಖಲಿಸಿ, ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುತ್ತಿದೆ.

- ರಾಜ್ಯದ ಎಲ್ಲಾ ನಗರ/ ಜಿಲ್ಲೆಗಳಲ್ಲಿ ಮಾನವ ಕಳ್ಳ ಸಾಗಾಣಿಕ ನಿಷೇಧ ಘಟಲವನ್ನು (AHTU) ಸ್ಥಾಪಿಸಿದ್ದು, ಸದರಿ ಘಟಕಗಳು ಮಹಿಳಾ ಪೋಲೀಸ್ ಠಾಣೆಗಳ ಠಾಣಾಧಿಕಾರಿಗಳು ಉಸ್ತುವಾರಿಯಲ್ಲಿ ಕಾರ್ಯನಿರ್ವಹಿಸುತ್ತಿದೆ. ರಾಜ್ಯದಲ್ಲಿ ಸ್ಥಾಪಿಸಿಲಾಗಿರುವ (AHTU) ಘಟಕಗಳ ಮೇಲ್ವಿಚಾರಣೆಗಾಗಿ ಎಡಿಜಿಪಿ ಮಟ್ಟದ ಅಧಿಕಾರಿಯನ್ನು ಅಧಿಕಾರಿಯನ್ನಾಗಿ ನೇಮಕ ಮಾಡಲಾಗಿದೆ.
- ಕಾನೂನಿನ ಬಗ್ಗೆ ಅರಿವು ಅಲ್ಲದೆ ಅಪರಾಧ ತಡೆ ಮಾಸಾಚರಣೇ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಜನ ಜಾಗೃತಿ ಕಾರ್ಯಕ್ರಮಗಳನ್ನುಕೈಗೊಳ್ಳಲಾಗುತ್ತಿದೆ.

- ಅಪರಾಧ ಚಟುವಟಿಕೆಗಳಲ್ಲಿ ಹಾಗೂ ಮಕ್ಕಳ ಭಿಕ್ಷಾಟನೆಯಲ್ಲಿ ತೊಡಗಿಸಿರುವಂತಗ ಅಪರಿಚಿತ ವ್ಯಕ್ತಿಗಳು ಕಂಡು ಬಂದಲ್ಲಿ ಅಂತಹವರು ಕಂಡು ಬಂದಲ್ಲಿ ಠಾಣೆಗೆ ಮಾಹಿತಿ ನೀಡುವಂತೆ ಸೂಚಿಸಲಾಗಿರುತ್ತದೆ.

- ಮಹಿಳೆ ಮತ್ತು ಮಕ್ಕಳ ಸುರಕ್ಷತೆಗಾಗಿ ವಿವಿಧ ಹೆಸರುಗಳಡಿಯಲ್ಲಿ ವಿಶೇಷ ಪಡೆಗಳನ್ನು ರಚಿಸಿದ್ದು, ಸದರಿ ಪಡೆಯು ನಗರದ ಮತ್ತು ಜಿಲ್ಲಾ ವ್ಯಾಪ್ತಿಯ ಶಾಲಾ- ಕಾಲೇಜು, ಪಾರ್ಕ್ ಗಳು, ಹಾಸ್ಟೆಲ್, ಪಿಜಿ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ ಮತ್ತು ಇತರೆ ಹೆಚ್ಚಾಗಿ ಮಹಿಳೆಯರು ಮತ್ತು ಮಕ್ಕಳ ಓಡಾಡುವ ಸ್ಥಳಗಳ ಪ್ರತಿದಿನ ಗಸ್ತು ಮಾಡುತ್ತಾ ಅರಿವು ಮೂಡಿಸಲಾಗುತ್ತಿದೆ.

- ಅಪರಿಚಿತ ವ್ಯಕ್ತಿಗಳ ಬಳಿ ಸಂಪರ್ಕ ಇಟ್ಟುಕೊಳ್ಳದಂತೆ, ಆಸೆ ಆಮಿಷಗಳನ್ನು ಒಡ್ಡುವ ಆಸಾಮಿಗಳ ಬಗ್ಗೆ ಮಹಿಳೆಯರಿಗೆ & ಮಕ್ಕಳಿಗೆ ಹಾಗೂ ಗ್ರಾಮಗಳಲ್ಲಿ ಸೂಕ್ತ ತಿಳುವಳಿಕೆಗಳನ್ನು ನೀಡಲಾಗಿರುತ್ತದೆ.

- ಮಹಿಳೆಯರು ಮತ್ತು ಮಕ್ಕಳ ಸುರಕ್ಷೆತೆ, ತ್ವರಿತ ನೆರವು, ಸ್ಪಂದನೆಗಾಗಿ ರಾಜ್ಯದಲ್ಲಿ 1050 ಪೋಲೀಸ್ ಠಾಣೆಗಳಲ್ಲಿ ವುಮೆನ್ ಹೆಲ್ಪ್ ಡೆಸ್ಕ್ ಗಳನ್ನು ಸ್ಥಾಪಿಸಲಾಗಿದೆ.

- ಪ್ರತಿ ಮಾನವ ಕಳ್ಳಸಾಗಾಣಿಕೆ ಘಟಕಗಳಿಗೆ ಹಿರಿಯ ಮತ್ತು ಕಿರಿಯ ಮಕ್ಕಳ ಕಲ್ಯಾಣಾಧಿಕಾರಿಗಳನ್ನು ನಿಯೋಜಿಸಿ, ಅವರುಗಳಿಗೆ ತರಬೇತಿ ನೀಡಲಾಗಿರುತ್ತದೆ.

ಚಾಲ್ತಿಯಲ್ಲಿರುವ ಸಾಮಾಜಿಕ ಜಾಲತಾಣಗಳಾದ ಬ್ಲಾಗ್.ಟ್ವಿಟರ್, ಫೇಸ್ ಬುಕ್, ಪೊಲೀಸ್ ವೆಬ್ ಸೈಟ್ ಹಾಗೂ ಇತರೆ ಜಾಲತಾಣಗಳ ಮೂಲಕ ಮಾನವ ಕಳ್ಳ ಸಾಗಾಣೆ ಬಗ್ಗೆ ಜಾಗೃತಿ ಮೂಡಿಸುವ ಸಂದೇಶವನ್ನು ಪ್ರಕಟಿಸಲಾಗಿದೆ.

## ಅನುಬಂಧ-3

### ಶ್ರೀ ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು),ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:210ಗೆ

### ಮಾಹಿತಿ

**ಸರ್ಕಾರದಿಂದ ಮಹಿಳೆಯರ ಆರ್ಥಿಕ ಮತ್ತು ಸಾಮಾಜಿಕ ಸಬಲೀಕರಣಕ್ಕಾಗಿ ಈ ಕೆಳಕಂಡ ಯೋಜನೆಗಳು ಅನುಷ್ಠಾನಗೊಳ್ಳುಗೊಳ್ಳುತ್ತಿವೆ**

**ಮಹಿಳೆಯರ ಆರ್ಥಿಕ ಸಬಲೀಕರಣಕ್ಕಾಗಿ ಸ್ತ್ರೀಶಕ್ತಿ ಯೋಜನೆ:-**

ಮಹಿಳೆಯರ ಆರ್ಥಿಕ ಸಬಲೀಕರಣಕ್ಕಾಗಿ ಸ್ತ್ರೀಶಕ್ತಿ ಯೋಜನೆಯನ್ನು ರಾಜ್ಯದಲ್ಲಿ ಅಕ್ಟೋಬರ್ 2000 ರಿಂದ ಅನುಷ್ಠಾನಗೊಳಿಸಲಾಗುತ್ತಿದೆ. ರಾಜ್ಯದಲ್ಲಿ ಒಟ್ಟು 1,65,960/- ಸ್ತ್ರೀಶಕ್ತಿ ಸ್ವಸಹಾಯ ಗುಂಪುಗಳು ರಚನೆಯಾಗಿವೆ. 25 ಲಕ್ಷ ಮಹಿಳೆಯರನ್ನು ಸಂಘಟಿಸಲಾಗಿದೆ. ಮಹಿಳೆಯರನ್ನು ಸ್ತ್ರೀಶಕ್ತಿ ಗುಂಪುಗಳಲ್ಲಿ ಸಂಘಟಿಸುವುದರ ಮೂಲಕ ಆರ್ಥಿಕ ಹಾಗೂ ಸಾಮಾಜಿಕ ಸಶಕ್ತತೆಯನ್ನು ತರುವುದು ಯೋಜನೆಯ ಮುಖ್ಯ ಉದ್ದೇಶವಾಗಿದೆ.

ಯೋಜನೆಯಡಿ ಸ್ತ್ರೀಶಕ್ತಿ ಗುಂಪುಗಳಿಗೆ ಸುತ್ತುನಿಧಿ, ಹೆಚ್ಚುವರಿ ಸುತ್ತುನಿಧಿ, ಅಧಿಕ ಉಳಿತಾಯ ಮತ್ತು ಆದಾಯೋತ್ಪನ್ನ ಚಟುವಟಿಕೆಗಳಲ್ಲಿ ತೊಡಗಿಕೊಂಡಿರುವ ಸ್ತ್ರೀಶಕ್ತಿ ಗುಂಪುಗಳಿಗೆ ಪ್ರೋತ್ಸಾಹಧನ, ಶೇಕಡ 6 ರ ಬಡ್ಡಿ ಸಹಾಯಧನ, ಇತ್ಯಾದಿ ಆರ್ಥಿಕ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

**ಮಹಿಳೆಯರ ಸಾಮಾಜಿಕ ಸಬಲೀಕರಣಕ್ಕಾಗಿ ಯೋಜನೆಗಳು:-**

- **ಸಾಂತ್ವನ ಯೋಜನೆ:-** ಸಮಾಜದಲ್ಲಿ ವರದಕ್ಷಿಣೆ ಕಿರುಕುಳ, ಲೈಂಗಿಕ ಕಿರುಕುಳ, ಕೌಟುಂಬಿಕ ದೌರ್ಜನ್ಯ, ಅತ್ಯಾಚಾರಕ್ಕೊಳಗಾದ ಮಹಿಳೆಯರಿಗೆ ಕಾನೂನು ನೆರವು ಹಾಗೂ ಆಪ್ತ ಸಮಾಲೋಚನೆಯನ್ನು ಒದಗಿಸಲಾಗುತ್ತಿದೆ. ಪ್ರಸ್ತುತ ರಾಜ್ಯದಲ್ಲಿ 178 ಸಾಂತ್ವನ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.
- **ಕೌಟುಂಬಿಕ ದೌರ್ಜನ್ಯದಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005 ನಿಯಮ 2006:-** ಕುಟುಂಬದಲ್ಲಿ ಮಹಿಳೆಯರ ಮೇಲೆ ದೌರ್ಜನ್ಯ ಉಂಟಾದಾಗ, ನ್ಯಾಯಾಲಯದ ಮುಖಾಂತರ ಮಹಿಳೆಯರಿಗೆ ಆರ್ಥಿಕ ಪರಿಹಾರ, ರಕ್ಷಣಾ ಆದೇಶ, ವಾಸದ ಆದೇಶ, ಮಕ್ಕಳ ವಶ, ತಾತ್ಕಾಲಿಕ ಆಶ್ರಯ, ವೈದ್ಯಕೀಯ ಹಾಗೂ ಕಾನೂನು ನೆರವನ್ನು ಒದಗಿಸುತ್ತಿದೆ.
- **ಉತ್ಕೃಷ್ಟತಾ ಕೇಂದ್ರ ಯೋಜನೆ:-** ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಸೂಕ್ತ ನೆರವು ಹಾಗೂ ಮಾರ್ಗದರ್ಶನ ನೀಡಲು ನಿಮ್ಹಾನ್ಸ್ ಮತ್ತು ರಾಷ್ಟ್ರೀಯ ಕಾನೂನು ಶಾಲಾ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಪ್ರಾರಂಭಿಸಲು ಒಡಂಬಡಿಕೆ (MOU) ಮಾಡಿಕೊಂಡು ಉತ್ಕೃಷ್ಟತಾ ಕೇಂದ್ರ ಅನುಷ್ಠಾನಗೊಳಿಸಲಾಗುತ್ತಿದೆ.
- **ಮಹಿಳಾ ಸಹಾಯವಾಣಿ-181:** ಮಹಿಳೆಯರಿಗೆ ಮಾಹಿತಿಯನ್ನು ನೀಡಲು ಹಾಗೂ ದೌರ್ಜನ್ಯ ಮತ್ತು ಸಂಕಷ್ಟದಲ್ಲಿರುವ ಮಹಿಳೆಯರಿಗೆ ತುರ್ತು ನೆರವನ್ನು ಒದಗಿಸುವ ನಿಟ್ಟಿನಲ್ಲಿ ಯೂನಿವರ್ಸಲೈಸೇಷನ್ ಆಫ್ ವುಮೆನ್ ಹೆಲ್ಪ್ ಲೈನ್ -181 ಎಂಬ ಉಚಿತ ದೂರವಾಣಿ ಸೇವೆಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ 104-ಸಹಾಯವಾಣಿ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗುತ್ತಿದೆ. ಈ ಸೇವೆಯನ್ನು ದಿನದ 24X7 ಗಂಟೆಗಳು ರಾಜ್ಯಾದ್ಯಂತ ಒದಗಿಸಲಾಗುತ್ತಿದೆ.
- **ಉದ್ಯೋಗಸ್ಥ ಮಹಿಳೆಯರಿಗೆ ವಸತಿನಿಲಯಗಳು:-**2022-23ನೇ ಸಾಲಿನಲ್ಲಿ ಬೆಂಗಳೂರು ನಗರ, ಮೈಸೂರು, ಹುಬ್ಬಳ್ಳಿ-ಧಾರವಾಡ, ಬೆಳಗಾವಿ, ದಕ್ಷಿಣ ಕನ್ನಡ ಹಾಗೂ ಕಲಬುರಗಿ ಜಿಲ್ಲೆಗಳಲ್ಲಿ 24 ಉದ್ಯೋಗಸ್ಥ ಮಹಿಳೆಯರಿಗೆ ವಸತಿನಿಲಯಗಳನ್ನು ಬಾಡಿಗೆ ಕಟ್ಟಡಗಳಲ್ಲಿ ಹೊಸದಾಗಿ ಪ್ರಾರಂಭಿಸಲಾಗುತ್ತಿದೆ. ಗಾರ್ಮೆಂಟ್ಸ್, ಕೈಗಾರಿಕೆಗಳು ಮತ್ತು ಇತರ ಅಸಂಘಟಿತ ವಲಯಗಳಲ್ಲಿ ಕೆಲಸ ಮಾಡುವ ಮಹಿಳೆಯರಿಗೆ ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಅಲ್ಪಸಂಖ್ಯಾತರ ದುಡಿಯುವ ಮಹಿಳೆಯರಿಗೆ ಆದ್ಯತೆ ಮೇರೆಗೆ ಸೌಲಭ್ಯ ನೀಡಲಾಗುವುದು.

# ಕೇಂದ್ರ ಸರ್ಕಾರದ ಯೋಜನೆಗಳು

- **ಸ್ವಾಧಾರ ಗೃಹ:-** ಸಂಕಷ್ಟಕರ ಪರಿಸ್ಥಿತಿಯಲ್ಲಿರುವ ಮಹಿಳೆಯರಿಗಾಗಿ ತಾತ್ಕಾಲಿಕ ಆಶ್ರಯ, ವೈದ್ಯಕೀಯ ಸೇವೆ, ಆಪ್ತ ಸಮಾಲೋಚನೆ ಮತ್ತು ಕಾನೂನು ನೆರವು ಒದಗಿಸಲಾಗುತ್ತಿದೆ. ಪ್ರಸ್ತುತ ರಾಜ್ಯಾದ್ಯಂತ 52 ಸ್ವಾಧಾರ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

- **ಒನ್ ಸ್ಟಾಪ್ ಸೆಂಟರ್ (ಸಖಿ):-** ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಒಂದೇ ಸೂರಿನಡಿ ಸಮಗ್ರ ಸೌಲಭ್ಯ ಅಂದರೆ, ವೈದ್ಯಕೀಯ ಚಿಕಿತ್ಸೆ ಮತ್ತು ನೆರವು, ಪೊಲೀಸ್ ನೆರವು, ಕಾನೂನು ನೆರವು ಹಾಗೂ ಸಮಾಲೋಚನೆ ವ್ಯವಸ್ಥೆಗಳನ್ನು ಒನ್ ಸ್ಟಾಪ್ ಸೆಂಟರ್‌ನಲ್ಲಿ ಒದಗಿಸಲಾಗುತ್ತಿದೆ. ರಾಜ್ಯದ ಎಲ್ಲಾ 30 ಜಿಲ್ಲೆಗಳಲ್ಲಿ ಒನ್ ಸ್ಟಾಪ್ ಸೆಂಟರ್ (ಸಖಿ)ಗಳು ಕಾರ್ಯನಿರ್ವಹಿಸುತ್ತಿವೆ.

- **ಕೇಂದ್ರ ಸರ್ಕಾರದ ಉದ್ಯೋಗಸ್ಥ ಮಹಿಳೆಯರ ವಸತಿಗೃಹ ನಿರ್ಮಾಣ ಯೋಜನೆ:**
  ಉದ್ಯೋಗಸ್ಥ ಮಹಿಳೆಯರಿಗೆ ಹಾಗೂ ಉದ್ಯೋಗಕ್ಕಾಗಿ ತರಬೇತಿ ಪಡೆಯುತ್ತಿರುವ ಮಹಿಳೆಯರಿಗೆ ಕಡಿಮೆ ವೆಚ್ಚದಲ್ಲಿ ಸುರಕ್ಷಿತವಾದಂತಹ ವಸತಿನಿಲಯಗಳನ್ನು ಒದಗಿಸುವುದಕ್ಕೋಸ್ಕರ ವಸತಿ ಗೃಹಗಳನ್ನು ನಿರ್ಮಿಸಲು ಕೇಂದ್ರ ಸರ್ಕಾರದಿಂದ ಅನುದಾನವನ್ನು ಸ್ವಯಂಸೇವಾ ಸಂಸ್ಥೆಗಳಿಗೆ ಬಿಡುಗಡೆ ಮಾಡಲಾಗುವುದು. ಪ್ರಸ್ತುತ ರಾಜ್ಯದಲ್ಲಿ 64 ಉದ್ಯೋಗಸ್ಥ ಮಹಿಳೆಯರ ವಸತಿಗೃಹಗಳು ಕಾರ್ಯನಿರ್ವಹಿಸುತ್ತಿವೆ.

# ಅನುಬಂಧ-01

## ಹಿರಿಯ ನಾಗರಿಕರಿಗಾಗಿ ಜಾರಿಗೊಳಿಸುತ್ತಿರುವ ಯೋಜನೆಗಳು

### 1. ಹಗಲು ಯೋಗಕ್ಷೇಮ ಕೇಂದ್ರಗಳು:

ರಾಜ್ಯದ 30 ಜಿಲ್ಲೆಗಳಿಗೆ ಹಗಲು ಯೋಗಕ್ಷೇಮ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರದ ಮಂಜೂರಾತಿ ದೊರೆತಿದ್ದು, ಪ್ರತಿ ಕೇಂದ್ರದಲ್ಲಿ ಸುಮಾರು 50-150 ಫಲಾನುಭವಿಗಳಿಗೆ ಅವಕಾಶ ಕಲ್ಪಿಸಿಕೊಡಲಾಗಿದ್ದು, ಸದರಿ ಯೋಜನೆಗೆ ಸರ್ಕಾರದಿಂದ ವಾರ್ಷಿಕ ರೂ.11.20 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗುತ್ತದೆ.

### 2. ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳು:

ಹಿರಿಯ ನಾಗರಿಕರು ಕಿರುಕುಳ, ಹಣಕಾಸಿನ ಶೋಷಣೆ, ಮಾನಸಿಕ ತುಮುಲ ಮತ್ತು ದುರ್ಬಲರಾಗಿ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಇಂತಹ ಸಮಸ್ಯೆಗಳ ನಿವಾರಣೆಗಾಗಿ ಹಾಗೂ ತುರ್ತು ಸಹಾಯಕ್ಕಾಗಿ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳನ್ನು ರಾಜ್ಯದ 30 ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲು ಬೆಳಗಾವಿ ಮತ್ತು ಕಲಬುರಗಿ ಜಿಲ್ಲೆಗಳನ್ನು ಹೊರತುಪಡಿಸಿ ಉಳಿದ 28 ಜಿಲ್ಲೆಗಳಲ್ಲಿ ಸಹಾಯವಾಣಿ ಕೇಂದ್ರಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಆವರಣದಲ್ಲಿ, ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಿಂದ ನಡೆಸಲಾಗುತ್ತಿದೆ.

### 3. ಹಿರಿಯ ನಾಗರಿಕರ ವೃದ್ಧಾಶ್ರಮ:

ರಾಜ್ಯದ 30 ಜಿಲ್ಲೆಗಳಲ್ಲಿ ನಿರ್ಗತಿಕ ಹಿರಿಯ ನಾಗರಿಕರಿಗಾಗಿ ವೃದ್ಧಾಶ್ರಮಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದ್ದು, ಈ ವೃದ್ಧಾಶ್ರಮದಲ್ಲಿ 25 ನಿರ್ಗತಿಕ ಹಿರಿಯ ನಾಗರಿಕರನ್ನು ದಾಖಲಿಸಿಕೊಳ್ಳಲು ಅವಕಾಶವಿದ್ದು, ಒಂದು ವೃದ್ಧಾಶ್ರಮದ ನಿರ್ವಹಣೆಗಾಗಿ ವಾರ್ಷಿಕ ರೂ.8.00ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದ್ದು, ಇದರಲ್ಲಿ ಸಿಬ್ಬಂದಿ ವೆಚ್ಚ, ನಿರ್ವಹಣಾ ವೆಚ್ಚ, ಔಷಧಿ, ಕಟ್ಟಡ ಬಾಡಿಗೆ, ವೃತ್ತ ಪತ್ರಿಕೆ ಹಾಗೂ ಇತರೆ ವೆಚ್ಚಗಳಿಗಾಗಿ ಒಟ್ಟು ಯೋಜನಾ ವೆಚ್ಚದ ಶೇ.90ರಷ್ಟು ಅನುದಾನವನ್ನು ಸ್ವಯಂ ಸೇವಾ ಸಂಸ್ಥೆಗಳಿಗೆ ನೀಡಲಾಗುತ್ತಿದ್ದು ಉಳಿದ ಶೇ.10ರಷ್ಟನ್ನು ಸಂಸ್ಥೆಯು ಭರಿಸಬೇಕಾಗುತ್ತದೆ. ಅನುದಾನವನ್ನು ಜಿಲ್ಲಾ ಪಂಚಾಯತ್, ಮೂಲಕ ಮಂಜೂರು ಮಾಡಲಾಗುತ್ತಿದೆ.

ರಾಜ್ಯದ ಪ್ರತಿ ಕಂದಾಯ ಉಪ ವಿಭಾಗದಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವೃದ್ಧಾಶ್ರಮಗಳನ್ನು ಪ್ರಾರಂಭಿಸಲು ಅವಕಾಶವಿದ್ದು, ಪ್ರಸ್ತುತ 9 ಕಂದಾಯ ಉಪ ವಿಭಾಗಕ್ಕೆ ವೃದ್ಧಾಶ್ರಮ ನಡೆಸಲು ಆಡಳಿತಾತ್ಮಕ ಮಂಜೂರಾತಿ ದೊರೆತ್ತಿರುತ್ತದೆ.

### 4. ಹಿರಿಯ ನಾಗರಿಕರಿಗೆ ಗುರುತಿನ ಚೀಟಿಗಳು:

60 ವರ್ಷ ಮೇಲ್ಪಟ್ಟ ವಯೋಮಾನದ ಹಿರಿಯ ನಾಗರಿಕರ ಗುರುತಿನ ಚೀಟಿ ಪಡೆಯಲು ಸೇವಾ ಸಿಂಧು ಆನ್‌ಲೈನ್ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗಿದ್ದು, ದಿ:01.10.2018ರಿಂದ ಹಿರಿಯ ನಾಗರಿಕರು ಸೇವಾ ಸಿಂಧು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ ಹಿರಿಯ ನಾಗರಿಕರ ಗುರುತಿನ ಚೀಟಿಯನ್ನು ಪಡೆಯಬಹುದಾಗಿದೆ.